ಶ್ರೀ ತಿಪ್ಪಣ್ಣಪ್ಪ ಕಮಕನೂರು (ವಿಧಾನಸಭೆಯಿಂದ ಚುನಾಯಿತರಾದವರು), ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರು ______ (ಶೂನ್ಯವೇಳೆ)ರಡಿ ನೀಡಿರುವ ಸೂಚನೆಗೆ

**ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಹೇಳಿಕೆ**

**ಸೂಚನೆ:-**

**2012 ರಲ್ಲಿ ಆಫ್ರಿಕನ್ ಕ್ಯಾಟ್‌ಫಿಶ್‌ಗಳ ಸಾಕಾಣಿಕೆಯನ್ನು ಸರ್ಕಾರ ನಿಷೇಧಿಸಿದ್ದರೂ, ಇವುಗಳನ್ನು ಅಕ್ರಮವಾಗಿ ಸಾಕಾಣಿಕೆ ಮಾಡುತ್ತಿರುವ ಕುರಿತು.**

**ಹೇಳಿಕೆ:-**

ಆಫ್ರಿಕನ್ ಕ್ಯಾಟ್ ಫಿಶ್ (*Clarias gariepinus*) ಮೀನನ್ನು ಸಾಕಾಣಿಕೆ, ಸಾಗಾಣಿಕೆ ಹಾಗೂ ಮಾರಾಟ ಮಾಡುವುದನ್ನು ಕರ್ನಾಟಕದ ಮಾನ್ಯ ಉಚ್ಚ ನ್ಯಾಯಾಲಯವು ದಿ: 06-02-2013 ರಂದು ಹೊರಡಿಸಿರುವ ಆದೇಶದ ಪ್ರಕಾರ ನಿಷೇಧಿಸಿದೆ. ಮೀನುಗಾರಿಕೆ ಇಲಾಖೆಯು ಪತ್ರ ಸಂಖ್ಯೆ: ಮೀನಿ/10/ಆರ್‌ಎಸ್‌ಹೆಚ್/2016 ದಿನಾಂಕ: 11-08-2016 ರಲ್ಲಿ ಇಲಾಖಾಧಿಕಾರಿಗಳಿಗೆ ಉಚ್ಚ ನ್ಯಾಯಾಲಯದ ಆದೇಶದಂತೆ ಸೂಕ್ತ ಕ್ರಮವಹಿಸಲು ಸೂಚಿಸಲಾಗಿದೆ.

ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಆಫ್ರಿಕನ್ ಕ್ಯಾಟ್ ಫಿಶ್ ಸಾಕಾಣಿಕೆ, ಸಾಗಾಣಿಕೆ ಹಾಗೂ ಮಾರಾಟವನ್ನು ನಿಯಂತ್ರಿಸಲು ತಹಸೀಲ್ದಾರ್, ಪೋಲಿಸ್ ಇನ್ಸಪೆಕ್ಟರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಓ) ಹಾಗೂ ಸ್ಥಳೀಯ ಮೀನುಗಾರಿಕೆ ಸಹಾಯಕ ನಿರ್ದೇಶಕರನ್ನು ಒಳಗೊಂಡಿರುವ ಜಿಲ್ಲಾಧಿಕಾರಿಯ ಅಧ್ಯಕ್ಷತೆಯಲ್ಲಿ ಜಿಲ್ಲಾಮಟ್ಟದ ಟಾಸ್ಕ ಫೋರ್ಸ್ (Taskforce) ನ್ನು ರಚಿಸಲಾಗಿರುತ್ತದೆ. ಇಂತಹ ಪ್ರಕರಣಗಳು ವರದಿಯಾದಲ್ಲಿ ಟಾಸ್ಕ ಫೋರ್ಸ್ ಕಟ್ಟುನಿಟ್ಟಿನ ಕ್ರಮವಹಿಸುತ್ತದೆ.

ಆಫ್ರಿಕನ್ ಕ್ಯಾಟ್ ಫಿಶ್ ಉತ್ಪಾದನೆ, ಪಾಲನೆ, ಸಾಗಾಣಿಕೆ ಮತ್ತು ಮಾರಾಟವನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸುವುದು. ಆಫ್ರಿಕನ್ ಕ್ಯಾಟ್‌ಫಿಶ್‌ಗಳನ್ನು ವಶಪಡಿಸಿ ಕೊಂಡು ನಾಶಪಡಿಸುವುದು ಹಾಗೂ ಸಾಗಾಣಿಕೆಗಾಗಿ ಬಳಸಿಕೊಂಡ ವಾಹನವನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಹಸ್ತಾಂತರಿಸುವುದು. ಸಾಕಾಣಿಕೆದಾರರು, ಸಾಗಾಣಿಕೆದಾರರು ಮತ್ತು ಮಾರಾಟಗಾರರ ಮೇಲೆ ಸಿ.ಆರ್.ಪಿ.ಸಿ. 133ರಂತೆ ಪೋಲೀಸ್ ಇಲಾಖೆಯವರು ದೋಷಾರೋಪಣೆ ಪಟ್ಟಿ ತಯಾರಿಸಿ ಕ್ರಮವಹಿಸುತ್ತಾರೆ.

ಹಲವೆಡೆ ಇಲಾಖೆ ಅಧಿಕಾರಿಗಳು ಕ್ಯಾಟ್‌ಫಿಶ್ ಹೊಂಡಗಳನ್ನು ತೆರವುಗೊಳಿಸಿದ ನಂತರ ಕೆಲವೇ ದಿನಗಳಲ್ಲಿ ಬೇರೊಂದು ಕಡೆ ಹೊಂಡ ತೆಗೆದು ಪುನಃ ಸಾಕಾಣಿಕೆ ದಂಧೆಯನ್ನು ನಡೆಸುತ್ತಿರುವುದಾಗಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ. ಈ ರೀತಿಯ ಯಾವುದೇ ಸಾಕಾಣಿಕೆ ಕಂಡುಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲು ಇಲಾಖಾ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಇಲಾಖೆಯ ಅಧಿಕಾರಿಗಳಿಂದ ಆಫ್ರಿಕನ್ ಕ್ಯಾಟ್‌ಫಿಶ್‌ಗಳ ಸಾಕಾಣಿಕೆ, ಸಾಗಾಣಿಕೆ ಮತ್ತು ಮಾರಾಟ ಚಟುವಟಿಕೆ ಮರುಕಳಿಸದಂತೆ ಸಾರ್ವಜನಿಕರಿಗೆ ಹಾಗೂ ಸಾಕಾಣಿಕಾದಾರರಿಗೆ ಜಾಗೃತಿ ಮೂಡಿಸಲಾಗುತ್ತಿದೆ.

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಸಂಖ್ಯೆ: ಪಸಂಮೀ 162 ಮೀಇಇ 2025